ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು	: ಶ್ರೀ. ಯು. ಬಿ.ವೆಂಕಟೇಶ್
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 198
ಉತ್ತರಿಸಬೇಕಾದ ದಿನಾಂಕ	: 14.12.2021
ಉತ್ತರಿಸಬೇಕಾದ ಸಚಿವರು	: ಸಹಕಾರ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ಬೆಂಗಳೂರು ನಗರದ ಬಸವನಗುಡಿಯ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್‌ನ ಸದಸ್ಯರ ಹಿತ ಕಾಪಾಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು:	ಬೆಂಗಳೂರು ನಗರದ ಬಸವನಗುಡಿಯ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕಿನ ಸದಸ್ಯರ ಹಿತ ಕಾಪಾಡುವಲ್ಲಿ ಸರ್ಕಾರವು ಕೆಳಕಂಡ ಕ್ರಮ ಕೈಗೊಂಡಿರುತ್ತದೆ. 1) 2014-15 ರಿಂದ 2018-19 ರವರೆಗಿನ ಮರುಲೆಕ್ಕಪರಿಶೋಧನೆಗೆ ಆದೇಶಿಸಲಾಗಿದೆ. 2014-15 ಮತ್ತು 2015-16ನೇ ಸಾಲಿನ ಮರುಲೆಕ್ಕಪರಿಶೋಧನೆ ಪೂರ್ಣಗೊಂಡಿರುತ್ತದೆ. 2016-17ನೇ ಸಾಲಿನ ಮರುಲೆಕ್ಕ ಪರಿಶೋಧನೆ ಪ್ರಗತಿಯಲ್ಲಿದೆ. 2) ಕರ್ನಾಟಕ ಸಹಕಾರಸಂಘಗಳ ಅಧಿನಿಯಮ 1959 ರ ಪ್ರಕರಣ 64 ರ ವಿಚಾರಣೆಗೆ ಆದೇಶಿಸಲಾಗಿತ್ತು. ವಿಚಾರಣೆ ವರದಿ ದಿನಾಂಕ 08-11-2021 ರಂದು ಸಲ್ಲಿಕೆಯಾಗಿದ್ದು, ಮುಂದಿನ ಕ್ರಮದ ಬಗ್ಗೆ ಪರಿಶೀಲಿಸಲಾಗುತ್ತಿದೆ. 3) ಬ್ಯಾಂಕಿನ ಹಗರಣಕ್ಕೆ ಸಂಬಂಧಪಟ್ಟಂತೆ ಸಿಐಡಿ ತನಿಖೆಗೆ ಆದೇಶಿಸಲಾಗಿದೆ. 4) ಬ್ಯಾಂಕಿನಲ್ಲಿ ಹಣ ದುರುಪಯೋಗಕ್ಕೆ ಕಾರಣರಾದ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆ. ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.
ಆ	ಬ್ಯಾಂಕ್‌ನ ಹಗರಣ ಬಗ್ಗೆ ಸಿ.ಐ.ಡಿ. ತನಿಖೆಯ ಪ್ರಗತಿ ಏನು:	1. ಈ ಪ್ರಕರಣದ ತನಿಖೆಯ ಪ್ರಗತಿಯ ಮೇಲ್ವಿಚಾರಣೆಯನ್ನು ಮಾನ್ಯ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರ ನೇತೃತ್ವದ ದ್ವಿಸದಸ್ಯ ಪೀಠವು ನಡೆಸುತ್ತಿದ್ದು, ಇಲ್ಲಿಯವರೆಗೆ 09 ತನಿಖಾ ಪ್ರಗತಿ ವರದಿಗಳನ್ನು ಸಲ್ಲಿಸಲಾಗಿರುತ್ತದೆ. 2. ಈ ಪ್ರಕರಣದಲ್ಲಿ ಮೇಲ್ನೋಟಕ್ಕೆ 923 ಕೋಟಿ ರೂಪಾಯಿಗಳ ಹಣಕಾಸಿನ ಅವ್ಯವಹಾರವಾಗಿರುವುದಾಗಿ ದೂರು ಸಲ್ಲಿಸಲಾಗಿರುತ್ತದೆ. ತನಿಖಾ ಕಾಲದಲ್ಲಿ ಆರೋಪಿಗಳಾದ ಕೆ. ರಾಮಕೃಷ್ಣ, ಜಿ. ರಘುನಾಥ್ ಮತ್ತು ವಿ.ಆರ್. ರಾಜೇಶ್‌ರವರುಗಳಿಂದ ನಗದು ಹಣ

		ರೂ.17,88,110/-ಗಳನ್ನು ಜಪ್ತಿ ಪಡಿಸಲಾಗಿರುತ್ತದೆ. ಮುಂದುವರೆದು ಆರೋಪಿಗಳು ಮತ್ತು ಅವರ ಅವಲಂಬಿತ ಸದಸ್ಯರ ಹೆಸರಿನಲ್ಲಿದ್ದ ಒಟ್ಟು 9,548 ವಿವಿಧ ಬ್ಯಾಂಕ್ ಖಾತೆಗಳಲ್ಲಿದ್ದ ರೂ. 15 ಕೋಟಿಗೂ ಅಧಿಕ ಹಣವನ್ನು ಡೆಬಿಟ್ ಫ್ರೀಜ್ ಮಾಡಲಾಗಿರುತ್ತದೆ. ತನಿಖೆಯಲ್ಲಿ ಆರೋಪಿತರು ಹಾಗೂ ಅವರ ಸಂಬಂಧಿಕರ ಹೆಸರಿನಲ್ಲಿದ್ದ ಸುಮಾರು 1,115 ಕೋಟಿ ರೂಪಾಯಿಗಿಂತ ಹೆಚ್ಚಿನ ಬೆಲೆಬಾಳುವ ಸ್ಥಿರಾಸ್ತಿಗಳನ್ನು ಗುರುತಿಸಿ ಪ್ರಿವೆನ್ಷನ್ ಆಫ್ ಮನಿ ಲ್ಯಾಂಡ್ರಿಂಗ್ ಆಕ್ಟ್ 2002ರ ಅಡಿಯಲ್ಲಿ ಕ್ರಮ ಜರುಗಿಸಲು ಜಾರಿ ನಿರ್ದೇಶನಾಲಯಕ್ಕೆ ವರದಿಯನ್ನು ಸಲ್ಲಿಸಲಾಗಿರುತ್ತದೆ. 3. ತನಿಖಾಧಿಕಾರಿಗಳು ತನಿಖಾ ಕಾಲದಲ್ಲಿ ಆರೋಪಿಗಳು ಮತ್ತು ಅವರ ಕುಟುಂಬದವರ ಹೆಸರಿನಲ್ಲಿದ್ದ ಸ್ಥಿರಾಸ್ತಿಗಳನ್ನು ಗುರುತಿಸಿ ಈ ಕುರಿತು ಕ್ರಮ ಜರುಗಿಸುವ ಬಗ್ಗೆ ವಿವರಗಳನ್ನು ಜಾರಿ ನಿರ್ದೇಶನಾಲಯಕ್ಕೆ ಸಲ್ಲಿಸಿದ್ದರ ಮೇರೆಗೆ ಜಾರಿ ನಿರ್ದೇಶನಾಲಯವು ದಿನಾಂಕ: 17.09.2020 ರಂದು ಪಿ.ಎಂ.ಎಲ್.ಎ. ಕಾಯ್ದೆ ರೀತ್ಯ ಮುಟ್ಟುಗೋಲು ಆದೇಶ ಹೊರಡಿಸಿದ್ದು ಮುಂದಿನ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. 4. ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಅವ್ಯವಹಾರದಲ್ಲಿ ಭಾಗಿಯಾದ ಮತ್ತೊಂದು ಸಂಸ್ಥೆಯಾದ ಶ್ರೀ ಗುರು ಸಾರ್ವಭೌಮ ಸೌಹಾರ್ದ ಪತ್ತಿನ ಸಹಕಾರ ನಿಯಮಿತದಲ್ಲಿನ ಅವ್ಯವಹಾರದ ಬಗ್ಗೆ ಸರ್ಕಾರವು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ, ಬೆಂಗಳೂರು ರವರನ್ನು ಕರ್ನಾಟಕ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ಅಧಿನಿಯಮ 2004ರ ಅಡಿಯಲ್ಲಿ ಕ್ರಮ ಜರುಗಿಸಲು ಸಕ್ಷಮ ಪ್ರಾಧಿಕಾರವನ್ನಾಗಿ ನೇಮಕಗೊಳಿಸಿರುತ್ತದೆ. ಸಕ್ಷಮ ಪ್ರಾಧಿಕಾರಿಗಳಿಗೆ ತನಿಖೆಯಲ್ಲಿ ಗುರುತಿಸಿರುವ ಸ್ಥಿರ ಮತ್ತು ಚರಾಸ್ತಿಗಳ ವಿವರಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಸಿ.ಐ.ಡಿ.ಯವರು ವರದಿಯನ್ನು ಸಲ್ಲಿಸಿದ್ದು ಮುಟ್ಟುಗೋಲು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. 5. ತನಿಖಾಧಿಕಾರಿ ಇದುವರೆವಿಗೆ ಪ್ರಕರಣದಲ್ಲಿ ಭಾಗಿಯಾಗಿರುವ ಒಟ್ಟು 37 ಜನ ಆರೋಪಿಗಳನ್ನು ದಸ್ತಗಿರಿ ಮಾಡಿರುತ್ತಾರೆ. 11 ಜನ ಆರೋಪಿಗಳು

		ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನನ್ನು ಪಡೆದುಕೊಂಡಿದ್ದು, 04 ಆರೋಪಿಗಳು ಮರಣ ಹೊಂದಿರುತ್ತಾರೆ. 6. ಬ್ಯಾಂಕಿನಲ್ಲಿ ಏಪ್ರಿಲ್ 2009ನೇ ಸಾಲಿನಿಂದ ಜನವರಿ 2020ರ ಸಾಲಿನವರೆಗೆ ನಡೆದಿರುವ ಹಣಕಾಸಿನ ಅವ್ಯವಹಾರದ ಬಗ್ಗೆ ಮತ್ತು ಸುಳ್ಳು ಲಾಭ ನಷ್ಟದ ತ:ಖ್ತೆಯ ಕುರಿತು ಮೆ॥ ಕೆನ್ & ಕಂಪನಿ ರವರು ಫಾರೆನ್ಸಿಕ್ ಆಡಿಟ್ ನಡೆಸುತ್ತಿದ್ದು ಹಾಲಿ 2009-10ನೇ ಸಾಲಿನ ಹಣಕಾಸಿನ ಅವ್ಯವಹಾರದ ಬಗ್ಗೆ ಆಡಿಟ್ ವರದಿಯನ್ನು ಸಲ್ಲಿಸಿದ್ದರ ಮೇರೆಗೆ ದಿನಾಂಕ: 12.08.2021 ರಂದು ಮಾನ್ಯ ನ್ಯಾಯಾಲಯಕ್ಕೆ 2009-10ರ ಸಾಲಿನಲ್ಲಿ ನಡೆದಿರುವ ಹಣಕಾಸಿನ ಅವ್ಯವಹಾರಕ್ಕೆ ಸಂಬಂಧಪಟ್ಟಂತೆ ಒಟ್ಟು 28 ಜನ ಆರೋಪಿಗಳ ವಿರುದ್ಧ ಪ್ರಾಥಮಿಕ ದೋಷಾರೋಪಣಾ ಪಟ್ಟಿಯನ್ನು ದಿನಾಂಕ 12.08.2021 ರಂದು ಸಲ್ಲಿಸಿದ್ದು, ಸದರಿ ದೋಷಾರೋಪಣಾ ಪಟ್ಟಿಯನ್ನು ಸಿ.ಸಿ.ನಂಬರ್ 28892/2020 ರಲ್ಲಿ ನ್ಯಾಯಾಲಯವು ಅಂಗೀಕರಿಸಿ ವಿಚಾರಣೆ ಕೈಗೊಂಡಿರುತ್ತದೆ. 7. ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತದಲ್ಲಿ ಮತ್ತು ಶ್ರೀ ಗುರು ಸಾರ್ವಭೌಮ ಸೌಹಾರ್ದ ಪತ್ತಿನ ಸಹಕಾರ ನಿಯಮಿತದಲ್ಲಿ ನಡೆದಿರುವ ಹಣಕಾಸಿನ ಅವ್ಯವಹಾರದ ಬಗ್ಗೆ ಪಾರೆನ್ಸಿಕ್ ಆಡಿಟ್‌ನ್ನು ಲೆಕ್ಕಪರಿಶೋಧಕರು ಮಾಡುತ್ತಿದ್ದು, ಪಾರೆನ್ಸಿಕ್ ಆಡಿಟ್ ವರದಿ ಮುಗಿದ ಕೂಡಲೇ, ವಾರ್ಷಿಕವಾರು ದೋಷಾರೋಪಣಾ ಪಟ್ಟಿಗಳನ್ನು ಸಂಬಂಧಪಟ್ಟ ನ್ಯಾಯಾಲಯಗಳಿಗೆ ಸಲ್ಲಿಸಲಾಗುವುದು.
ಇ	ತಜ್ಞರ ಸಮಿತಿಯನ್ನು ರಚಿಸಲಾಗಿದೆಯೇ: ಸಮಿತಿ ಯಾವ ಕಾಲಮಿತಿಯೊಳಗೆ ವರದಿ ಸಲ್ಲಿಸಲಿದೆ?	ತಜ್ಞರ ಸಮಿತಿಯನ್ನು ರಚಿಸಿರುವುದಿಲ್ಲ. ಭಾರತೀಯ ರಿಸರ್ವ್ ಬ್ಯಾಂಕ್‌ನ ಶಿಫಾರಸ್ಸು ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯದ ನಿರ್ದೇಶನದ ಪ್ರಕಾರ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಪರಿಣತಿ ಹೊಂದಿರುವ ಶ್ರೀ ಅಶೋಕನ್ ಎಂಬುವವರು ಆಡಳಿತಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಕಡತ ಸಂಖ್ಯೆ ಸಿಒ 94 ಸಿಆರ್‌ಸಿ 2021

(ಎಸ್. ಟಿ. ಸೋಮಶೇಖರ್)
ಸಹಕಾರ ಸಚಿವರು